5

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮಹದೇವಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬೆಸ್ಕಾಂ ಯು.ಜಿ ಕೇಬಲ್ ಅಳವಡಿಸುವ ಕಾಮಗಾರಿಗಳಿಗಾಗಿ ಅಗೆಯಲಾಗಿರುವ ರಸ್ತೆಗಳನ್ನು ತುರ್ತಾಗಿ ಅಭಿವೃದ್ಧಿಪಡಿಸಲು ರೂ.45.50 ಕೋಟಿಗಳ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಆಯುಕ್ತರು/ಪಿ .ಆರ್/224/21-22, ದಿನಾಂಕ: 08-02-2022.
2. ಸರ್ಕಾರದ ಸಮಸಂಖ್ಯೆಯ ಪತ್ರ ಸಂಖ್ಯೆ: 16-03-2022.
3. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಆಯುಕ್ತರು/ಪಿ .ಆರ್/224/21-22, ದಿನಾಂಕ: 27-04-2022.

* * * * *

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ದಿನಾಂಕ: 08-02-2022ರ ಪತ್ರದಲ್ಲಿ, ಮುಖ್ಯ ಆಯುಕ್ತರು, ಬಿಬಿಎಂಪಿ ರವರು, ಮಾನ್ಯ ಶಾಸಕರು, ಮಹದೇವಪುರ ವಿಧಾನಸಭಾ ಕ್ಷೇತ್ರ ರವರು ದಿನಾಂಕ: 18-01-2022ರ ಪತ್ರದಲ್ಲಿ ಮಾನ್ಯ ಮುಖ್ಯ ಮಂತ್ರಿಯವರಿಗೆ ಮನವಿ ಸಲ್ಲಿಸಿ, ಮಹದೇವಪುರ ವಿಧಾನ ಸಭಾ ಕ್ಷೇತ್ರದ ಈ ಕೆಳಕಂಡ ವಾರ್ಡ್ ಗಳ ವ್ಯಾಪ್ತಿಗಳಲ್ಲಿ ಬೆಸ್ಕಾಂನ ಯು.ಜಿ. ಕೇಬಲ್ ಅಳವಡಿಸುವ ಕಾಮಗಾರಿಗಾಗಿ ರಸ್ತೆಗಳನ್ನು ಅಗೆದಿದ್ದು, ಇದರಿಂದ ವಾಹನಗಳಿಗೆ ಹಾಗೂ ಸಾರ್ವಜನಿಕರಿಗೆ ಸಂಚಾರಕ್ಕೆ ತುಂಬಾ ತೊಂದರೆ ಉಂಟಾಗಿರುತ್ತದೆ. ಈ ರಸ್ತೆಗಳು ಐಟಿಪಿಎಲ್ ಹಾಗೂ ಪ್ರಮುಖ ಸಾಫ್ಟ್ ವೇರ್ ಕಂಪನಿಗಳಿಗೆ ಸಂಪರ್ಕ ರಸ್ತೆಗಳಾಗಿದ್ದು, ಸದರಿ ರಸ್ತೆಗಳಲ್ಲಿ ವಾಹನ ದಟ್ಟಣೆ ಸಹ ಹೆಚ್ಚಾಗಿರುತ್ತದೆ. ಆದುದರಿಂದ, ಈ ಕೆಳಕಂಡ ವಾರ್ಡ್ ಗಳ ವ್ಯಾಪ್ತಿಯಲ್ಲಿನ ರಸ್ತೆಗಳನ್ನು ತುರ್ತಾಗಿ ಅಭಿವೃದ್ಧಿಪಡಿಸುವುದು ಅತ್ಯಾವಶ್ಯಕವಾಗಿರುತ್ತದೆ. ಆದುದರಿಂದ ಈ ಕೆಳಕಂಡ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳಿಗೆ ಒಟ್ಟು ರೂ.45.50 ಕೋಟಿಗಳ ಅಗತ್ಯ ಅನುದಾನ ಬಿಡುಗಡೆ ಮಾಡುವಂತೆ ಬಿಬಿಎಂಪಿ ಮುಖ್ಯ ಆಯುಕ್ತರು ಕೋರಿರುತ್ತಾರೆ.

ದಿನಾಂಕ: 27-01-2022 ರ ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿ ರವರ ಪತ್ರದಲ್ಲಿ ಶ್ರೀ ಅರವಿಂದ ಲಿಂಬಾವಳಿ, ಶಾಸಕರು, ರವರ ಪತ್ರ ಸಂಖ್ಯೆ: 1360/2022, ದಿನಾಂಕ: 18-01-2022 ರ ಪತ್ರವು ಸ್ವಯಂವೇದ್ಯವಾಗಿದ್ದು, ಮಾನ್ಯ ಶಾಸಕರ ಪತ್ರದಲ್ಲಿ ಮಹದೇವಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ವಾರ್ಡ್ ಗಳ ವ್ಯಾಪ್ತಿಯಲ್ಲಿನ ರಸ್ತೆಗಳು ಹಾಳಾಗಿದ್ದು, ಇವುಗಳನ್ನು ತುರ್ತಾಗಿ ಅಭಿವೃದ್ಧಿಪಡಿಸುವುದು ಅತ್ಯಾವಶ್ಯಕವಾಗಿರುತ್ತದೆ. ಆದ್ದರಿಂದ ಪತ್ರದಲ್ಲಿ ನಮೂದಿಸಿರುವ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳಿಗೆ ಒಟ್ಟು ರೂ.45.50 ಕೋಟಿ ಅಗತ್ಯ ಅನುದಾನ ಬಿಡುಗಡೆ ಮಾಡಿ ಕಾಮಗಾರಿಗಳನ್ನು ತುರ್ತಾಗಿ ಕೈಗೊಳ್ಳಲು ಕೋರಿರುತ್ತಾರೆ. ಈ ಪತ್ರದ ಮೇಲೆ ಮಾನ್ಯ ಮುಖ್ಯಮಂತ್ರಿಗಳು "ನಗರೋತ್ಥಾನ" ಎಂದು ಷರಾ ದಾಖಲಿಸಿರುತ್ತಾರೆ. ಸದರಿ ಕಾಮಗಾರಿಗಳನ್ನು ನಗರೋತ್ಥಾನದಡಿ ಸೇರಿಸಿಕೊಳ್ಳುವಂತೆ ತಿಳಿಸಲು ಮಾನ್ಯ ಮುಖ್ಯಮಂತ್ರಿಯವರಿಂದ ನಿರ್ದೇಶಿತನಾಗಿದ್ದೇನೆ ಎಂದು ಮುಖ್ಯ ಆಯುಕ್ತರು ಬಿಬಿಎಂಪಿ ರವರಿಗೆ ಟಿಪ್ಪಣಿ ರವಾನಿಸಿರುತ್ತಾರೆ. ಕಾಮಗಾರಿಗಳ ವಿವರ ಈ ಕೆಳಗಿನಂತಿದೆ ಎಂದು ಕ್ರಿಯಾ ಯೋಜನೆಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮಾನ್ಯ ಶಾಸಕರು, ಮಹದೇವಪುರ ವಿಧಾನಸಭಾ ಕ್ಷೇತ್ರ ರವರು ತಮ್ಮ ಪತ್ರದ ಸಂಖ್ಯೆ: 1362/2022, ದಿನಾಂಕ: 08-02-2022 ರಲ್ಲಿ ಮಹದೇವಪುರ ವಿಧಾನಸಭಾ ಕ್ಷೇತ್ರದ ಈ ಕೆಳಕಂಡ ವಾರ್ಡ್ ವ್ಯಾಪ್ತಿಗಳಲ್ಲಿ ಬೆಸ್ಕಾಂನ ಯು.ಜಿ. ಕೇಬಲ್ ಅಳವಡಿಸುವ ಕಾಮಗಾರಿಗಾಗಿ ರಸ್ತೆಗಳನ್ನು ಅಗೆದಿದ್ದು, ಸದರಿ ರಸ್ತೆಗಳನ್ನು

. . .2/-

Scanned with CamScanner

ಅಭಿವೃದ್ಧಿಪಡಿಸಲು ದಿನಾಂಕ 18-01-2022ರ ಪತ್ರದಲ್ಲಿ ಕಾಮಗಾರಿಗಳ ಪಟ್ಟಿಯನ್ನು ನೀಡಲಾಗಿತ್ತು. ಸದರಿ ಕಾಮಗಾರಿಗಳ ಪಟ್ಟಿಯಲ್ಲಿ ದೊಡ್ಡನೆಕ್ಕುಂದಿ ಮತ್ತು ಕಾಡುಗೋಡಿ ವಾರ್ಡ್ ಗಳಲ್ಲಿ ಹೆಚ್ಚಿನ ರಸ್ತೆಗಳನ್ನು ಬೆಸ್ಕಾಂ ಅಗೆದಿದ್ದು, ಸದರಿ ರಸ್ತೆಗಳ ಅಭಿವೃದ್ಧಿಯು ಅತ್ಯವಶ್ಯಕವಾಗಿರುವುದರಿಂದ ಅವುಗಳನ್ನು ಸೇರ್ಪಡಿಸಿ, ಪಟ್ಟಿಯನ್ನು ಮಾರ್ಪಡಿಸಿ ಸಲ್ಲಿಸುತ್ತಾ, ಬದಲಿ ಕಾಮಗಾರಿಗಳಿಗೆ ಅನುಮೋದನೆ ನೀಡಬೇಕೆಂದು ಪತ್ರವನ್ನು ನೀಡಿರುತ್ತಾರೆ.

ಮಹದೇವಪುರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬೆಸ್ಕಾಂ ಯು.ಜಿ. ಕೇಬಲ್ ಅಳವಡಿಸುವ ಕಾಮಗಾರಿಗಳಿಗಾಗಿ ಅಗೆಯಲಾಗಿರುವ ರಸ್ತೆಗಳನ್ನು ತುರ್ತಾಗಿ ಅಭಿವೃದ್ಧಿಪಡಿಸಲು ನಗರೋತ್ಥಾನ ಯೋಜನೆಯಡಿಯಲ್ಲಿ ರೂ.45.50 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಿ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವಂತೆ ಬಿಬಿಎಂಪಿ ಮುಖ್ಯ ಆಯುಕ್ತರು ಕೋರಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ: (2) ರಲ್ಲಿ ಓದಲಾದ ದಿನಾಂಕ: 16-03-2022ರ ಸರ್ಕಾರದ ಪತ್ರದಲ್ಲಿ ಪ್ರಸ್ತುತ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಇತ್ತೀಚೆಗೆ ಅನುಮೋದನೆ ನೀಡಿರುವ "ಅಮೃತ ನಗರೋತ್ಥಾನ ಯೋಜನೆ"ಯ ಕ್ರಿಯಾ ಯೋಜನೆಯಲ್ಲಿ ಮಹದೇವಪುರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬೆಸ್ಕಾಂ ಯು.ಜಿ. ಕೇಬಲ್ ಅಳವಡಿಸುವ ಕಾಮಗಾರಿಗಳಿಗಾಗಿ ಅಗೆಯಲಾಗಿರುವ ರಸ್ತೆಗಳನ್ನು ತುರ್ತಾಗಿ ಅಭಿವೃದ್ಧಿಪಡಿಸುವ ಕಾಮಗಾರಿಗಳನ್ನು ಸೇರ್ಪಡೆಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರನ್ನು ಕೋರಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ: (3) ರಲ್ಲಿ ಓದಲಾದ ದಿನಾಂಕ: 08-02-2022ರ ಪತ್ರದಲ್ಲಿ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಮಾನ್ಯ ಶಾಸಕರು, ಮಹದೇವಪುರ ವಿಧಾನಸಭಾ ಕ್ಷೇತ್ರ ರವರು ದಿನಾಂಕ: 18-01-2022ರ ಪತ್ರದಲ್ಲಿ ಮಾನ್ಯ ಮುಖ್ಯ ಮಂತ್ರಿಯವರಿಗೆ ಮನವಿ ಸಲ್ಲಿಸಿ, ಮಹದೇವಪುರ ವಿಧಾನ ಸಭಾ ಕ್ಷೇತ್ರದ ಈ ಕೆಳಕಂಡ ವಾರ್ಡ್ ಗಳ ವ್ಯಾಪ್ತಿಗಳಲ್ಲಿ ಬೆಸ್ಕಾಂನ ಯು.ಜಿ. ಕೇಬಲ್ ಅಳವಡಿಸುವ ಕಾಮಗಾರಿಗಾಗಿ ರಸ್ತೆಗಳನ್ನು ಅಗೆದಿದ್ದು, ವಾಹನಗಳಿಗೆ ಹಾಗೂ ಸಾರ್ವಜನಿಕರಿಗೆ ಸಂಚಾರಕ್ಕೆ ತುಂಬಾ ತೊಂದರೆ ಉಂಟಾಗಿರುತ್ತದೆ. ಈ ರಸ್ತೆಗಳು ಐಟಿಪಿಎಲ್ ಹಾಗೂ ಪ್ರಮುಖ ಸಾಫ್ಟ್ ವೇರ್ ಕಂಪನಿಗಳಿಗೆ ಸಂಪರ್ಕ ರಸ್ತೆಗಳಾಗಿದ್ದು, ಸದರಿ ರಸ್ತೆಗಳಲ್ಲಿ ವಾಹನ ದಟ್ಟಣೆ ಸಹ ಹೆಚ್ಚಾಗಿರುತ್ತದೆ. ಆದುದರಿಂದ, ಸದರಿ ರಸ್ತೆಗಳನ್ನು ತುರ್ತಾಗಿ ಅಭಿವೃದ್ಧಿಪಡಿಸುವುದು ಅತ್ಯಾವಶ್ಯಕವಾಗಿರುತ್ತದೆ. ಸದರಿ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳಿಗೆ ಒಟ್ಟು ರೂ.45.50 ಕೋಟಿಗಳ ಅಗತ್ಯ ಅನುದಾನ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ದಿನಾಂಕ: 27-01-2022ರ ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿ ರವರ ಪತ್ರದಲ್ಲಿ ಶ್ರೀ ಅರವಿಂದ ಲಿಂಬಾವಳಿ, ಮಾನ್ಯ ಶಾಸಕರು, ಮಹದೇವಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ವಾರ್ಡ್ ಗಳ ವ್ಯಾಪ್ತಿಯಲ್ಲಿನ ರಸ್ತೆಗಳು ಹಾಳಾಗಿದ್ದು, ಇವುಗಳನ್ನು ತುರ್ತಾಗಿ ಅಭಿವೃದ್ಧಿಪಡಿಸುವುದು ಅತ್ಯಾವಶ್ಯಕವಾಗಿರುತ್ತದೆ. ಆದ್ದರಿಂದ, ಪತ್ರದಲ್ಲಿ ನಮೂದಿಸಿರುವ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳಿಗೆ ಒಟ್ಟು ರೂ.45.50 ಕೋಟಿಗಳ ಅಗತ್ಯ ಅನುದಾನ ಬಿಡುಗಡೆ ಮಾಡಿ ಕಾಮಗಾರಿಗಳನ್ನು ತುರ್ತಾಗಿ ಕೈಗೊಳ್ಳಲು ಕೋರಿರುತ್ತಾರೆ. ಸದರಿ ಪತ್ರದ ಮೇಲೆ ಮಾನ್ಯ ಮುಖ್ಯಮಂತ್ರಿಗಳು "ನಗರೋತ್ಥಾನ" ಎಂದು ಷರಾ ದಾಖಲಿಸಿರುತ್ತಾರೆ.

ಸದರಿ ಕಾಮಗಾರಿಗಳನ್ನು "ನಗರೋತ್ಥಾನದಡಿ ಸೇರಿಸಿಕೊಳ್ಳುವಂತೆ ತಿಳಿಸಲು ಮಾನ್ಯ ಮುಖ್ಯಮಂತ್ರಿಯವರಿಂದ ನಿರ್ದೇಶಿತನಾಗಿದ್ದೇನೆ" ಎಂದು ಮುಖ್ಯ ಆಯುಕ್ತರು, ಬಿಬಿಎಂಪಿ ರವರಿಗೆ ಟಿಪ್ಪಣಿ ರವಾನಿಸಿರುತ್ತಾರೆ. ಮಾನ್ಯ ಶಾಸಕರು, ಮಹದೇವಪುರ ವಿಧಾನ ಸಭಾ ಕ್ಷೇತ್ರ ರವರು ಮಾನ್ಯ

. . .3/-

Scanned with CamScanner

ಮುಖ್ಯಮಂತ್ರಿಯವರೊಂದಿಗೆ ನಡೆದ ವೀಡಿಯೊ ಕಾನ್ಫರೆನ್ಸ್ ಸಭೆಯಲ್ಲಿ ಮಹದೇವಪುರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬೆಸ್ಕಾಂ ಯು.ಜಿ. ಕೇಬಲ್ ಅಳವಡಿಸುವ ಕಾಮಗಾರಿಗಳಿಗಾಗಿ ಅಗೆಯಲಾಗಿರುವ ರಸ್ತೆಗಳನ್ನು ತುರ್ತಾಗಿ ಅಭಿವೃದ್ಧಿಪಡಿಸಲು ಅನುದಾನ ಬಿಡುಗಡೆ ಮಾಡಲು ಕೋರಿರುವ ಮೇರೆಗೆ ಮಾನ್ಯ ಮುಖ್ಯಮಂತ್ರಿಗಳು ಅನುದಾನ ಬಿಡುಗಡೆ ಮಾಡಲು ಆದೇಶಿಸಿರುತ್ತಾರೆ. ಪ್ರಸ್ತುತ ಆದೇಶಗಳಲ್ಲಿ ರಸ್ತೆಗಳನ್ನು ಅಗೆದಿರುವ ಸಂಸ್ಥೆಗಳಿಂದಲೇ ರಸ್ತೆ ದುರಸ್ತಿಪಡಿಸಲು ಕ್ರಮವಹಿಸಲು ಆದೇಶಿಸಲಾಗಿರುತ್ತದೆ. ಆದರೆ, ಸದರಿ ಕಾಮಗಾರಿಗಳು ಈ ಹಿಂದೆ ಮಹದೇವಪುರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬೆಸ್ಕಾಂ ಯು.ಜಿ. ಕೇಬಲ್ ಅಳವಡಿಸುವ ಕಾಮಗಾರಿಗಳಿಗಾಗಿ ಅಗೆಯಲಾಗಿರುವ ರಸ್ತೆಗಳನ್ನು ದುರಸ್ತಿಗೊಳಿಸಬೇಕಾಗಿದ್ದು, ಸದರಿ ಕಾಮಗಾರಿಗಳನ್ನು ತುರ್ತಾಗಿ ಕೈಗೊಳ್ಳಬೇಕಾಗಿರುತ್ತದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಬೆಸ್ಕಾಂ ಮಧ್ಯ ಬುಕ್ ಅಡ್ಜಸ್ಟ್‌ಮೆಂಟ್ ಅಡಿ ಕಾಮಗಾರಿಗಳನ್ನು ಕೈಗೊಳ್ಳಲು ಆದೇಶಿಸಿದ್ದು, ಸದರಿ ಕಾಮಗಾರಿಗಳಿಗೆ ಅನುದಾನ ಬಿಡುಗಡೆಯಾಗಿರುವುದಿಲ್ಲ.

ಸದರಿ ಕಾಮಗಾರಿಗಳನ್ನು ಕೈಗೊಳ್ಳಲು ಮಾನ್ಯ "ಮುಖ್ಯಮಂತ್ರಿಗಳ ಅಮೃತ್ ನಗರೋತ್ಥಾನ ಯೋಜನೆ"ಯಡಿಯಲ್ಲಿ ರೂ.45.50 ಕೋಟಿಗಳ ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡಿ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವಂತೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಕೋರಿರುತ್ತಾರೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮುಖ್ಯ ಆಯುಕ್ತರ ಪ್ರಸ್ತಾವನೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 57 ಎಂಎನ್‌ವೈ 2022,**
**ಬೆಂಗಳೂರು, ದಿನಾಂಕ: 03-06-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಮಹದೇವಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬೆಸ್ಕಾಂ ಯು.ಜಿ ಕೇಬಲ್ ಅಳವಡಿಸುವ ಕಾಮಗಾರಿಗಳಿಗಾಗಿ ಅಗೆಯಲಾಗಿರುವ ಈ ಕೆಳಕಂಡ ರಸ್ತೆಗಳನ್ನು ತುರ್ತಾಗಿ ಅಭಿವೃದ್ಧಿಪಡಿಸಲು, ಮಾನ್ಯ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆ"ಯಡಿಯಲ್ಲಿ ಹೆಚ್ಚುವರಿಯಾಗಿ ರೂ.45.50 ಕೋಟಿಗಳ ಮೊತ್ತವನ್ನು ನಿಗಧಿಪಡಿಸಿ, ಈ ಆದೇಶದಲ್ಲಿ ನಮೂದಿಸಿರುವ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿ ಆದೇಶಿಸಿದೆ.

| Sl No | Ward | Name of Works | Amount (Rs in lakhs) |
|---|---|---|---|
| 1 | Hoodi | Restoration and Reconstruction of Deteriorated road dug by Bescom at Coconut layout and Alfa Garden in Hoodi ward no.54 | 55.00 |
| 2 | Hoodi | Restoration and Reconstruction of Deteriorated road dug by Bescom at Ayappanagara in Hoodi ward no.54 | 52.00 |
| 3 | Hoodi | Restoration and Reconstruction of Deteriorated road dug by Bescom at Manjunath layout, Prashanth layout and Balaji Layout in Hoodi ward no.54 | 65.00 |

. . 4/-

Scanned with CamScanner

| | | | |
|---|---|---|---|
| 4 | Hoodi | Restoration and Reconstruction of Deteriorated road dug by Bescom at Kodigehalli village cross roads in Hoodi ward no.54 | 60.00 |
| 5 | Hoodi | Restoration and Reconstruction of Deteriorated road dug by Bescom at Sadaramangala Old village in Hoodi ward no.54 | 53.00 |
| 6 | Hoodi | Restoration and Reconstruction of Deteriorated road dug by Bescom at Tigalarapalya village and Hoodi Village in Hoodi ward no.54 | 75.00 |
| 7 | Garudachar palya | Restoration and Reconstruction of Deteriorated road dug by Bescom at RHB Colony 1st main 2nd main, 1 to 5th cross roads and Garudacharpalya main road in Garudacharpalya ward no 82 | 70.00 |
| 8 | Garudachar palya | Restoration and Reconstruction of Deteriorated road dug by Bescom at Kaveri Nagara Graphite India road and NGEF Area in Garudacharpalya ward no 82 | 80.00 |
| 9 | Garudachar palya | Restoration and Reconstruction of Deteriorated road dug by Bescom at Hoody Nagappa lyt, Basavanna nagara, Sitarampalya and Pattanduru Agrahara area in ward no 82 | 95.00 |
| 10 | Kadugodi | Restoration and Reconstruction of Deteriorated Road Dug BY BESCOM in Patalamma layout & Kadugudi village (Kashi vishwanatha temple road) and Prashanth Layout in Kadugudi ward No 83 | 90.00 |
| 11 | Kadugodi | Restoration and Reconstruction of Deteriorated Road Dug BY BESCOM at Channasandra and Dinnur in Kadugudi ward no 83 | 80.00 |
| 12 | Hagadur | Restoration and Reconstruction of Deteriorated Road Dug BY BESCOM in Sathya sai Layout 1st & 3rd cross in Hagadur ward | 70.00 |
| 13 | Hagadur | Restoration and Reconstruction of Deteriorated Road Dug BY BESCOM in Brookbond 2,3rd in Hagadur ward no 84 | 90.00 |
| 14 | Hagadur | Restoration and Reconstruction of Deteriorated Road Dug BY BESCOM in Vinayaka Layout main Road in Hagadur ward no 84 | 60.00 |
| 15 | Dodda nekkundi | Restoration and reconstruction of deteriorated road dug by BESCOM in AECS Layout E block roads and Chinnapanahalli and Doddanekkundhi village in ward no 85 | 95.00 |

. . .5/-

Scanned with CamScanner

3



| | | | |
|---|---|---|---|
| 16 | Dodda nekkundi | Restoration and reconstruction of deteriorated road dug by BESCOM in Vaikuntam layout roads,Nagappa reddy layout road,spice garden in Doddanekkundi ward no 85 | 90.00 |
| 17 | Dodda nekkundi | Restoration and reconstruction of deteriorated road dug by BESCOM in Gururaja Layout, Shanbog Layout, Wasa Layout,Nisarga Layout, SE Colony,Nanjundeswara temple road in Doddanekkundi ward no 85 | 95.00 |
| 18 | Varthur | Restoration and Reconstruction of Deteriorated Road Dug BY BESCOM in Vinayaka Nagara in Varthur ward no 149 | 80.00 |
| 19 | Varthur | Restoration and Reconstruction of Deteriorated Road Dug BY BESCOM next to Drum Factory Road in Varthur ward no 149 | 75.00 |
| 20 | Varthur | Restoration and Reconstruction of Deteriorated Road Dug BY BESCOM in Ganesha Layout 1st,2nd & 3rd cross road in Varthur ward no 149 | 125.00 |
| 21 | Varthur | Restoration and Reconstruction of Deteriorated Road Dug BY BESCOM in Narega Road near Burial Ground in Varthur ward | 80.00 |
| 22 | Varthur | Restoration and Reconstruction of Deteriorated Road Dug BY BESCOM near Crisolis School road & Gunjur Muneshwara Temple in Varthur ward no 149 | 70.00 |
| 23 | Varthur | Restoration and Reconstruction of Deteriorated Road Dug BY BESCOM in Vinayaka Nagara in Varthur ward no 149 | 80.00 |
| 24 | Bellandur | Restoration and reconstruction of Deteriorated road dug by BESCOM in 3rd A, B & 4th B Cross roads in Bellandur Village at Ward No 150 | 90.00 |
| 25 | Bellandur | Restoration and reconstruction of Deteriorated road dug by BESCOM in Mahatma Gandhi Road 2nd Cross and Doddammadevi temple road in Bellandur Village at Ward No 150 | 110.00 |
| 26 | Bellandur | Restoration and reconstruction of Deteriorated road dug by BESCOM in Shobha Club house Road & Om shakti temple road in Bellandur Village at Ward No 150 | 60.00 |
| 27 | Bellandur | Restoration and reconstruction of Deteriorated road dug by BESCOM in Sai baba Temple road & ICCI Bank road In Greenglen Layout at Bellandur Village at Ward No 150 | 160.00 |

...6/-

Scanned with CamScanner

| | | | |
|---|---|---|---|
| 28 | Bellandur | Restoration and reconstruction of Deteriorated road dug by BESCOM in 1st A Cross,Anjaneya swamy temple road ,2nd A & 2nd B Greenglen Layout at Bellandur Village at Ward No 150 | 120.00 |
| 29 | Bellandur | Restoration and reconstruction of Deteriorated road dug by BESCOM in 2nd Cross at Bellandur Village at Ward No 150 | 55.00 |
| 30 | Bellandur | Restoration and reconstruction of Deteriorated road dug by BESCOM in Venugopalswamy temple Surrounding roads at Bellandur Village at Ward No 150 | 75.00 |
| 31 | Bellandur | Restoration and reconstruction of Deteriorated road dug by BESCOM in Blooming Dale layout road at Kaikondrahalli Village at Ward No 150 | 100.00 |
| 32 | Bellandur | Restoration and reconstruction of Deteriorated road dug by BESCOM in Oceanous Freesia, Appu bakery road at Ambalipura Village at Ward No 150 | 70.00 |
| 33 | Bellandur | Restoration and reconstruction of Deteriorated road dug by BESCOM in 3rd Main road at Kasavanhalli Village at Ward No 150 | 90.00 |
| 34 | Bellandur | Restoration and reconstruction of Deteriorated road dug by BESCOM in Velliyamma Layout at Kasavanhalli Village at Ward No 150 | 60.00 |
| 35 | Bellandur | Restoration and reconstruction of Deteriorated road dug by BESCOM in Jayaramreddy Layout and Surrounding Cross roads at Kasavanhalli Village at Ward No 150 | 75.00 |
| 36 | Bellandur | Restoration and reconstrucion of Deteriorated road dug by BESCOM at Junnasandra Main Road in Junnasandra Village at Ward No 150 | 125.00 |
| 37 | Bellandur | Restoration and reconstrucion of Deteriorated road dug by BESCOM at Devarabisanhalli lake road and 6th Cross in Devarabisanhalli Village at Ward No 150 | 110.00 |
| 38 | Bellandur | Restoration and reconstruction of Deteriorated road dug by BESCOM at AET College Cross roads in Doddakannelli Village at Ward No 150 | 125.00 |
| 39 | Bellandur | Restoration and reconstruction of Deteriorated road dug by BESCOM at Reliable Tranquil in Haraluru Village at Ward No 150 | 55.00 |
| 40 | Bellandur | Restoration and reconstruction of Deteriorated road dug by BESCOM at Reliable Lakedew in Haraluru Village at Ward No 150 | 150.00 |

. . .7/-

Scanned with CamScanner

| | | | |
|---|---|---|---|
| 41 | Bellandur | Restoration and reconstrucion of Deteriorated road dug by BESCOM at Ambalipura Residency in Ambalipura Village at Ward No 150 | 100.00 |
| | | **Mahadevapura Division Total** | **3515.00** |

**ರಸ್ತೆ ಮೂಲಭೂತ ಸೌಕರ್ಯ, ಮಹದೇವಪುರ ವಿಭಾಗದ ರಸ್ತೆಗಳು**

| Sl.No | Name of the roads | Amount (Rs in lakhs) |
|---|---|---|
| 1 | Restoration and reconstruction of Deteriorated road dug by BESCOM at Gear School road from Sarjapura road to Gear school | 1035.00 |
| 2 | Restoration and reconstruction of Deteriorated road dug by BESCOM at New Horizon College road | |
| 3 | Restoration and reconstruction of Deteriorated road dug by BESCOM at Croma Road | |
| 4 | Restoration and reconstruction of Deteriorated road dug by BESCOM at Somasundara Palya Road | |
| 5 | Restoration and reconstruction of Deteriorated road dug by BESCOM at Hoodi Circle to Big Bazaar | |
| 6 | Restoration and reconstruction of Deteriorated road dug by BESCOM at Whitefield main road (Hope farm to Varthur Kodi) | |
| 7 | Restoration and reconstruction of Deteriorated road dug by BESCOM at Legacy School main road Bilishivale | |
| | **Grand Total** | **4550.00** |

**ಷರತ್ತುಗಳು:**

1. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಮಹದೇವಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬೆಸ್ಕಾಂ ಯು.ಜಿ. ಕೇಬಲ್ ಅಳವಡಿಸುವ ಕಾಮಗಾರಿಗಳಿಗಾಗಿ ಅಗೆಯಲಾಗಿರುವ ದುಸ್ಥಿತಿಯಲ್ಲಿರುವ ರಸ್ತೆಗಳ ದುರಸ್ತಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಒಟ್ಟು ರೂ.45.50 ಕೋಟಿಗಳ ಅಂದಾಜು ಮೊತ್ತದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದ್ದು, ಅನುವು ಮಾಡಿರುವ ರೂ.45.50 ಕೋಟಿಗಳಿಗೆ ಮೀರಿದ ಯಾವುದೇ ವೆಚ್ಚ ಮತ್ತು ಟೆಂಡರ್ ಪ್ರೀಮಿಯಂಗಾಗಿ ಮಾಡುವ ವೆಚ್ಚವನ್ನು ಬಿಬಿಎಂಪಿಯು ತನ್ನ ಸ್ವಂತ ಅನುದಾನದಿಂದ ಭರಿಸತಕ್ಕದ್ದು. ಟೆಂಡರ್ ಪ್ರೀಮಿಯಂ ಮೊತ್ತವನ್ನು ಅಂದಾಜಿನಲ್ಲಿ ಅನುವು ಮಾಡತಕ್ಕದ್ದಲ್ಲ.

2. ಸರ್ಕಾರವು ಬಿಬಿಎಂಪಿಯಿಂದ ಸಲ್ಲಿಕೆಯಾಗಿದ್ದ ಬೆಸ್ಕಾಂ ಯು.ಜಿ. ಕೇಬಲ್ ಅಳವಡಿಸುವ ಕಾಮಗಾರಿಯಿಂದ ದುಸ್ಥಿತಿಯಲ್ಲಿರುವ ರಸ್ತೆಗಳ ದುರಸ್ತಿ ಮತ್ತು ಅಭಿವೃದ್ಧಿ ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ಅನುಮೋದಿಸಿದ್ದು, ಕ್ರಿಯಾ ಯೋಜನೆಯ ಎಲ್ಲ ಕಾಮಗಾರಿಗಳ

. . .8/-

Scanned with CamScanner

ಟೆಂಡರ್ ಆಹ್ವಾನಿಸುವ ಪೂರ್ವದಲ್ಲಿ ಸಂಬಂಧಪಟ್ಟ ಮುಖ್ಯ ಅಭಿಯಂತರರು ಕಡ್ಡಾಯವಾಗಿ ಸ್ಥಳ ಪರಿಶೀಲನೆ ಮಾಡಿ (ಅ) ಕಾಮಗಾರಿಯು ಬೆಸ್ಕಾಂ ಯು.ಜಿ. ಕೇಬಲ್ ಅಳವಡಿಸುವ ಕಾಮಗಾರಿಯಿಂದ ಕತ್ತರಿಸಲ್ಪಟ್ಟ ರಸ್ತೆ ಭಾಗಕ್ಕೆ ಸಂಬಂಧಿಸಿದೆ ಮತ್ತು (ಆ) ಸದರಿ ರಸ್ತೆಗಳಲ್ಲಿ ಬೆಸ್ಕಾಂ ಯು.ಜಿ. ಕೇಬಲ್ ಅಳವಡಿಸುವ ಕಾಮಗಾರಿಗಳು ಸಂಪೂರ್ಣವಾಗಿ ಮುಕ್ತಾಯಗೊಂಡಿದ್ದು, ಅಭಿವೃದ್ಧಿಪಡಿಸಿದ ನಂತರ ಮುಂದೆ ಮತ್ತೆ ಕಾಮಗಾರಿಗಳಿಗಾಗಿ ರಸ್ತೆ ಕತ್ತರಿಸುವ ಪ್ರಮೇಯ ಇರುವುದಿಲ್ಲವೆಂದು ಖಾತರಿಪಡಿಸಿಕೊಂಡ ನಂತರವಷ್ಟೆ ತಾಂತ್ರಿಕ ಮಂಜೂರಾತಿ ನೀಡತಕ್ಕದ್ದು ಮತ್ತು ಈ ಅಂಶವನ್ನು ತಾಂತ್ರಿಕ ಮಂಜೂರಾತಿಯಲ್ಲಿ ದಾಖಲಿಸತಕ್ಕದ್ದು. ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದ್ದಾಗ್ಯೂ ಸದರಿ ಅಂಶಗಳಿಗೆ ಅನುಗುಣವಾಗಿರದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳತಕ್ಕದ್ದಲ್ಲ.

3. ಸದರಿ ಕಾಮಗಾರಿಗಳನ್ನು ರೂ.10.00 ಕೋಟಿಗಳಿಗೆ ಕಡಿಮೆ ಇರದಂತೆ ಪ್ಯಾಕೇಜ್ ಗಳನ್ನು ಮಾಡಿ, ಪ್ಯಾಕೇಜ್ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ ಕಾಯ್ದೆ-1999 ಮತ್ತು ಕೆ.ಟಿ.ಪಿ.ಪಿ ನಿಯಮಗಳು-2000 ಹಾಗೂ e-procurement ಮುಖಾಂತರ ಕೈಗೊಂಡು, ಟೆಂಡರ್ ಗಳಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ ಎಸ್.ಎಫ್.ಸಿ 2016. ಬೆಂಗಳೂರು, ದಿನಾಂಕ: 14-06-2016 ಮತ್ತು 03-11-2016 ರಂತೆ ಸಕ್ಷಮ ಪ್ರಾಧಿಕಾರದ ಅನುಮೋದನೆಯನ್ನು ಪಡೆದು, ಕಾಮಗಾರಿಗಳನ್ನು ಮುಂದಿನ ಎರಡು ವರ್ಷಗಳಲ್ಲಿ ಹಂತಹಂತವಾಗಿ ಅನುಷ್ಠಾನಗೊಳಿಸುವುದು. ಯಾವುದೇ ಕಾಮಗಾರಿಗಳನ್ನು ವಿಭಜಿಸತಕ್ಕದ್ದಲ್ಲ.

4. ಕತ್ತರಿಸಿದ ರಸ್ತೆಭಾಗಗಳ ಪುನಶ್ಚೇತನ ಕಾಮಗಾರಿ ಹೊರತುಪಡಿಸಿ ಕ್ರಿಯಾ ಯೋಜನೆಯಲ್ಲಿ ಅನುಷ್ಠಾನಗೊಳಿಸಬೇಕಿರುವ ಇತರ ಕಾಮಗಾರಿಗಳಿಗೆ ಬದಲಾಗಿ ತುರ್ತು ಅಗತ್ಯವಿರುವ ಪರ್ಯಾಯ ಕಾಮಗಾರಿಗಳನ್ನು ಅನಿವಾರ್ಯ ಕಾರಣಗಳಿಗಾಗಿ ಅನುಷ್ಠಾನಗೊಳಿಸಲೇ ಬೇಕಿದ್ದಲ್ಲಿ ಮುಖ್ಯ ಆಯುಕ್ತರ ಸ್ಪಷ್ಟ ಶಿಫಾರಸಿನೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಮಾನ್ಯ ಮುಖ್ಯಮಂತ್ರಿಗಳ ಅನುಮೋದನೆ ಪಡೆದುಕೊಂಡು ಅನುಷ್ಠಾನಗೊಳಿಸುವ ವಿಕಲ್ಪ ಕಲ್ಪಿಸಿದೆ.

5. ಈ ಕ್ರಿಯಾ ಯೋಜನೆಯಲ್ಲಿ ಒಳಗೊಂಡಿರುವ ಕಾಮಗಾರಿಗಳು ಇತರೆ ಯಾವುದೇ ಯೋಜನೆ / ಅನುದಾನದಡಿಯಲ್ಲಿ ಪುನರಾವರ್ತನೆಯಾಗಿರುವುದಿಲ್ಲ ಎಂಬ ಬಗ್ಗೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಪೂರ್ವಾನ್ವಯವಾಗಿ ಖಚಿತಪಡಿಸಿಕೊಂಡು ಟೆಂಡರ್ ಕರೆಯತಕ್ಕದ್ದು.

6. ಅನುಮೋದಿತ ಕ್ರಿಯಾಯೋಜನೆಯಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ ಪ್ರಕಾರ ಕಾಮಗಾರಿಗಳನ್ನು ಅಳವಡಿಸಿಕೊಂಡು ಟೆಂಡರ್ ಕರೆದು ಅನುಷ್ಠಾನಗೊಳಿಸುವುದು ಬಿಬಿಎಂಪಿಯ ಮುಖ್ಯ ಆಯುಕ್ತರ ವೈಯಕ್ತಿಕ ಜವಾಬ್ದಾರಿಯಾಗಿರುತ್ತದೆ. ಈ ಆದೇಶ ಹೊರಡಿಸಿದ ಒಂದು ತಿಂಗಳೊಳಗಾಗಿ ಬಿಬಿಎಂಪಿಯ ಮುಖ್ಯ ಆಯುಕ್ತರು ತಮ್ಮ ಹಂತದಲ್ಲಿ ಕ್ರಿಯಾ ಯೋಜನೆಯ ಕಾಮಗಾರಿಗಳನ್ನು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ ಪ್ರಕಾರ ಕಾಮಗಾರಿಗಳಾಗಿ ವಿಂಗಡಿಸಿ ಆದೇಶ ಹೊರಡಿಸಿ ಸರ್ಕಾರಕ್ಕೆ ವರದಿ ಸಲ್ಲಿಸುವುದು.

7. ಕಾಮಗಾರಿಗಳ ಗುಣಮಟ್ಟದ ಬಗ್ಗೆ ಸಂಬಂಧಪಟ್ಟ ಬಿಬಿಎಂಪಿಯ ಪ್ರಧಾನ ಅಭಿಯಂತರರು ಹಾಗೂ ಮುಖ್ಯ ಅಭಿಯಂತರರು ನಿಗಾವಹಿಸಿ, ಉತ್ತಮ ಗುಣಮಟ್ಟದ ಆಸ್ತಿ ಸೃಜನೆಗೆ ಕಟ್ಟುನಿಟ್ಟಿನ ಕ್ರಮ ವಹಿಸತಕ್ಕದ್ದು.

8. ಅನುಮೋದನೆ ನೀಡಲಾದ ಕ್ರಿಯಾ ಯೋಜನೆಯಂತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸತಕ್ಕದ್ದು.

..9/-

Scanned with CamScanner

9. ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಕಾಮಗಾರಿಗಳ ಗುಣಮಟ್ಟದ ಬಗ್ಗೆ ಪ್ರತಿಷ್ಠಿತ ಸಂಸ್ಥೆಗಳಿಂದ ಗುಣಮಟ್ಟದ ತಪಾಸಣಾ ಕೈಗೊಂಡು ವರದಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

10. ಈ ಆದೇಶದಲ್ಲಿ ಅನುಮೋದನೆ ನೀಡಿರುವ ಕಾಮಗಾರಿಗಳ ಅನುಷ್ಠಾನ ವೇಳಾಪಟ್ಟಿಯನ್ನು ಮುಖ್ಯ ಆಯುಕ್ತರು, ಬಿಬಿಎಂಪಿ ರವರು ತಯಾರಿಸಿ, ಸರ್ಕಾರಕ್ಕೆ ಸಲ್ಲಿಸತಕ್ಕದ್ದು ಹಾಗೂ ಕಾಮಗಾರಿಗಳ ಪ್ರಗತಿ ವರದಿಯನ್ನು ಪ್ರತಿ ಮಾಹೆ ಎಂಪಿಕ್ ಸಭೆಗೆ ಸರ್ಕಾರಕ್ಕೆ ತಪ್ಪದೆ ಸಲ್ಲಿಸತಕ್ಕದ್ದು.

11. ಕರ್ನಾಟಕ ಆರ್ಥಿಕ ಸಂಹಿತೆ-1958, ಸಾಧಿಲ್ವಾರು ವೆಚ್ಚ, ಕೆಟಿಪಿಪಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾರ್ಯ ನಿಯಮಗಳನುಸಾರ ಕ್ರಮವಹಿಸತಕ್ಕದ್ದು.

12. ಉಳಿದಂತೆ ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021, ದಿನಾಂಕ: 14-01-2022 ರಲ್ಲಿನ ಎಲ್ಲಾ ಷರತ್ತುಗಳನ್ವಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀಸಾಗರ್ ಎನ್.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

03/06

**ಇವರಿಗೆ:**

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ 3 ಮತ್ತು 9) ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿಗಳು-3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
11. ಕಾರ್ಯಪಾಲಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with CamScanner